ದಿನಾಂಕ 01-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**<u>ಮುಖ್ಯ ವಿಚಾರಣೆ : ವಾದಿಯ ಪರ ಕುಃ ಪಿ.ಎಫ್.ಜೆ ವಕೀಲರಿಂದ ಶ್ರೀ ಬಿ.ಎಸ್.ಡಿ ವಕೀಲರ ಪರವಾಗಿಃ</u>**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಡ ಸಂಃ 206 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ಡ ಸಂಃ 1047 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ನಮೂನೆ-12 ರ ಹಕ್ಕು ಬದಲಾವಣೆ ವಹಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-3 ಎಂದು, ಡ ಸಂಃ 1645 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು, ಗ್ರಾಮ ನಮೂನೆ 7 ಮತ್ತು 12 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು, ಸ ನಂಃ 95/1 ರ ಜಮೀನಿನ ಕೈ ಬರವಣಿಗೆಯ ದೃಢೀಕೃತ ಪಹಣಿ ಪತ್ರಿಕೆ ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು, ಸ ನಂಃ 167/1 ರ ಜಮೀನಿನ 1975-76 ರಿಂದ 2000-01 ನೇ ಸಾಲಿನ 5 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ-7 ರಿಂದ 11 ಎಂದು, ಸನಂಃ 167/1 ರ ಗಣಕೀಕೃತ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-12 ಎಂದು ಮತ್ತು ದಿಃ 21-05-2019 ರ ನೋಂದಾಯಿತ ಖರೀದಿ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-13 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು**)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.
sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ